# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: | : | 349 |
| ಸದಸ್ಯರ ಹೆಸರು | : | ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 18-07-2024 |
| ಉತ್ತರಿಸುವ ಸಚಿವರು | : | ಮಾನ್ಯ ಉಪಮುಖ್ಯಮಂತ್ರಿ |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| (ಅ) | ಕೃಷ್ಣಾ ಮೇಲ್ದಂಡೆ ಯೋಜನೆಯು ಬಾಗಲಕೋಟೆ, ವಿಜಯಪುರ, ರಾಯಚೂರು, ಯಾದಗಿರಿ ಜಿಲ್ಲೆಗಳಲ್ಲಿ ಕಾರ್ಯ ವಿಸ್ತರಣೆಯಿದ್ದು, ಇಂತಹ ಬೃಹತ್ ಯೋಜನೆ ಇಲಾಖೆಯ ಕಛೇರಿಗೆ ಅಧಿಕಾರಿ ವರ್ಗ ಸಿಬ್ಬಂದಿಗಳ ಕೊರತೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ? | ಸರ್ಕಾರದ ಗಮನಕ್ಕೆ ಬಂದಿದೆ. |
| (ಆ) | ಬಂದಿದ್ದಲ್ಲಿ ಅಧಿಕಾರಿ ವರ್ಗ ಹಾಗೂ ಸಿಬ್ಬಂದಿಗಳ ಕೊರತೆಯಿಂದಾಗಿ ಈ ಯೋಜನೆಯು ಪೂರ್ಣಗೊಳ್ಳಲು ವಿಳಂಬವಾಗುವುದಿಲ್ಲವೇ? | ಹಾಲಿ ಖಾಲಿ ಹುದ್ದೆಗಳ ಎದುರಾಗಿ, ಪ್ರಭಾರ ವ್ಯವಸ್ಥೆಯ ಮೂಲಕ ನಿಗದಿತ ಕಾಲಾವಧಿಯೊಳಗೆ ಯೋಜನೆಗಳನ್ನು ಪೂರ್ಣಗೊಳಿಸಲು ಕ್ರಮ ಜರುಗಿಸಲಾಗುತ್ತಿದೆ. |
| (ಇ) | ಕೃಷ್ಣಾ ಮೇಲ್ದಂಡೆ ಪುನರ್ ನಿರ್ಮಾಣ ಮತ್ತು ಪುನರ್ವಸತಿ ಇಲಾಖೆಗೆ ಸರ್ಕಾರದಿಂದ ಮಂಜೂರಾದ ಭರ್ತಿ ಮಾಡಿಕೊಳ್ಳಲಾದ ಹಾಗೂ ಖಾಲಿಯಿರುವ ಹುದ್ದೆಗಳ ಸಂಖ್ಯೆ ಎಷ್ಟು? | ಕೃಷ್ಣಾ ಮೇಲ್ದಂಡೆ ಯೋಜನೆಯಡಿ ಎಲ್ಲ ಅಧೀನ ಕಛೇರಿಗಳನ್ನೊಳಗೊಂಡಂತೆ ಒಟ್ಟು 855 ಹುದ್ದೆಗಳು ಮಂಜೂರಾಗಿದ್ದು, 365 ಹುದ್ದೆಗಳು ಭರ್ತಿಯಾಗಿದ್ದು 490 ಹುದ್ದೆಗಳು ಖಾಲಿ ಇರುತ್ತವೆ. |
| ಈ | ಯಾವ ಕಾಲಮಿತಿಯಲ್ಲಿ ಈ ಖಾಲಿ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲಾಗುವುದು (ವಿವರ ನೀಡುವುದು) | ಜಲಸಂಪನ್ಮೂಲ ಇಲಾಖೆಯಲ್ಲಿ ಈ ಕೆಳಕಂಡ ಹುದ್ದೆಗಳಿಗೆ ನೇಮಕಾತಿ ಪ್ರಕ್ರಿಯೆ ಜಾರಿಯಲ್ಲಿರುತ್ತದೆ. (see table below) ಸದರಿ ನೇಮಕಾತಿ ಪ್ರಕ್ರಿಯೆ ಪೂರ್ಣಗೊಂಡ ನಂತರ ಕೃಷ್ಣಾ ಮೇಲ್ದಂಡೆ ಯೋಜನೆಯ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮ ಕೈಗೊಳ್ಳಲಾಗುವುದು. ಉಳಿದಂತೆ, ಕೃಷ್ಣಾ ಮೇಲ್ದಂಡೆ ಯೋಜನೆಯ ಭೂಸ್ವಾಧೀನ ಹಾಗೂ ಪುನರ್ವಸತಿ ಮತ್ತು ಪುನರ್ ನಿರ್ಮಾಣ ವಿಭಾಗಗಳಲ್ಲಿನ ಹುದ್ದೆಗಳನ್ನು ನಿಯೋಜನೆ ಮೇಲೆ ಭರ್ತಿ ಮಾಡಬೇಕಾಗಿದ್ದು, ಅಂತಹ ಹುದ್ದೆಗಳನ್ನು ವಿವಿಧ ಇಲಾಖೆಗಳಿಂದ ನಿಯೋಜನೆ ಆಧಾರದ ಮೇಲೆ ಭರ್ತಿ ಮಾಡಲಾಗುತ್ತಿದೆ. |

| ಕ್ರ.ಸಂ. | ಹುದ್ದೆಗಳು | ಸಂಖ್ಯೆ |
|---|---|---|
| 1. | ಸಹಾಯಕ ಇಂಜಿನಿಯರ್ | 100 |
| 2. | ಕಿರಿಯ ಇಂಜಿನಿಯರ್ | 300 |
| 3. | ದ್ವಿತೀಯ ದರ್ಜೆ ಸಹಾಯಕರು | 182 |

ಸಂಖ್ಯೆ:ಜಸಂಇ 128 ಸೇಇಸಿ 2024

(ಡಿ.ಕೆ. ಶಿವಕುಮಾರ್)
ಉಪ ಮುಖ್ಯಮಂತ್ರಿ